All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

24.02.2025 19.35 P.M.

*****************

ಮುಖ್ಯಾಂಶಗಳು

- ಪಿಎಂ ಕಿಸಾನ್ ಯೋಜನೆಯ ೧೯ನೇ ಕಂತಿನ ಮೊತ್ತವನ್ನು ರೈತರ ಖಾತೆಗಳಿಗೆ ವರ್ಗಾಯಿಸಿದ ಪ್ರಧಾನಿ ನರೇಂದ್ರ ಮೋದಿ
- ಮುಕ್ತ ವ್ಯಾಪಾರ ಮಾತುಕತೆ ಪುನರಾರಂಭಿಸಲು ಭಾರತ-ಬ್ರಿಟನ್ ಪರಸ್ಪರ ಒಪ್ಪಿಗೆ
- ಕೃತಕ ಬುದ್ಧಿಮತ್ತೆ ಬಳಸಿ ರಕ್ಷಣಾ ವಲಯದಲ್ಲಿ ಹೊಸ ಸಂಶೋಧನೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ
- ಆರ್‌ಬಿಐನಿಂದ ಆರ್ಥಿಕ ಸಾಕ್ಷರತಾ ಸಪ್ತಾಹಕ್ಕೆ ಇಂದು ಚಾಲನೆ
- ಡಬ್ಲ್ಯೂಪಿಎಲ್ ಕ್ರಿಕೆಟ್: ರಾಯಲ್ ಚಾಲೆಂಜರ್ಸ್ ಬೆಂಗಳೂರು-ಯುಪಿ ವಾರಿಯರ್ಸ್ ಮುಖಾಮುಖಿ

*****************

ಜಾಗತಿಕ ದಕ್ಷಿಣದ ಮಹಿಳಾ ಶಾಂತಿಪಾಲಕರ ಸಮ್ಮೇಳನದಲ್ಲಿ ಭಾಗವಹಿಸಿದ ಸದಸ್ಯರು ನವದೆಹಲಿಯ ರಾಷ್ಟ್ರಪತಿ ಭವನದಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾದರು.

ಮಹಿಳಾ ಶಾಂತಿಪಾಲಕರನ್ನು ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಗಳು, ಶಾಂತಿಪಾಲನ ಕಾರ್ಯಾಚರಣೆಯಲ್ಲಿ ಮಹಿಳೆಯರ ಉಪಸ್ಥಿತಿಯು ಕಾರ್ಯಾಚರಣೆಯನ್ನು ಹೆಚ್ಚು ವೈವಿಧ್ಯಮಯ ಮತ್ತು ಎಲ್ಲರನ್ನು ಒಳಗೊಳ್ಳುವಂತೆ ಮಾಡುತ್ತದೆ ಎಂದು ಹೇಳಿದರು.

ಲಿಂಗಾಧಾರಿತ ಹಿಂಸಾಚಾರವನ್ನು ತೊಡೆದು ಹಾಕಲು, ವಿಶ್ವಾಸವನ್ನು ಬೆಳೆಸಲು ಮತ್ತು ಸಂವಾದವನ್ನು ಉತ್ತೇಜಿಸಲು ಮಹಿಳಾ ಶಾಂತಿಪಾಲಕರು ಉತ್ತಮವಾಗಿ ಸಜ್ಜಾಗಿದ್ದಾರೆ ಎಂದರು.

೨ ಲಕ್ಷದ ೯೦ ಸಾವಿರಕ್ಕೂ ಹೆಚ್ಚು ಭಾರತೀಯ ಶಾಂತಿಪಾಲಕರು ೫೦ಕ್ಕೂ ಹೆಚ್ಚು ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಅಂತಾರಾಷ್ಟ್ರೀಯ ಶಾಂತಿ ಮತ್ತು ಭದ್ರತೆ ಕಾರಣಕ್ಕಾಗಿ ಪ್ರತಿಕೂಲ ಪರಿಸ್ಥಿತಿಗಳಲ್ಲಿ ನಿಯೋಜಿಸಲಾದ ೯ ಸಕ್ರಿಯ

ಕಾರ್ಯಾಚರಣೆಗಳಲ್ಲಿ ೫ ಸಾವಿರಕ್ಕೂ ಹೆಚ್ಚು ಭಾರತೀಯ ಶಾಂತಿಪಾಲಕರಿದ್ದಾರೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದರು.

*****************

ಬಿಹಾರದ ಭಗಲ್ಪುರದಲ್ಲಿಂದು ಪಿಎಂ ಕಿಸಾನ್ ಯೋಜನೆಯ ೧೯ನೇ ಕಂತಿನ ಮೊತ್ತವನ್ನು ರೈತರ ಖಾತೆಗಳಿಗೆ ಪ್ರಧಾನಿ ನರೇಂದ್ರ ಮೋದಿ ವರ್ಗಾವಣೆ ಮಾಡಿದರು.

ದೇಶದ ೯.೮ ಕೋಟಿ ರೈತರಿಗೆ ೨೨ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಮೊತ್ತವನ್ನು ರೈತರ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಿದರು. ಈ ವೇಳೆ ಪ್ರಧಾನಿ, ಹೈನು ಘಟಕ ಮತ್ತು ರೈತ ಉತ್ಪಾದಕ ಸಂಘಟನೆಯನ್ನು ಉದ್ಘಾಟಿಸಿದರು.

ನಂತರ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ವಿಕಸಿತ ಭಾರತದ ಗುರಿ ಸಾಕಾರಗೊಳಿಸುವಲ್ಲಿ ಕೃಷಿಕರು, ಯುವಕರು ಮತ್ತು ನಾರಿಶಕ್ತಿಯ ಪ್ರಭಾವ ಹೆಚ್ಚಾಗಿದೆ. ಕೃಷಿಕರು ದೇಶದ ಬೆನ್ನೆಲುಬು, ಕೋವಿಡ್‌ನಂತಹ ಕಠಿಣ ಪರಿಸ್ಥಿತಿಯಲ್ಲಿಯೂ ಕೃಷಿಕರು ತಮ್ಮ ಕರ್ತವ್ಯದಿಂದ ಹಿಂದಕ್ಕೆ ಸರಿಯದೇ ದೇಶದ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ. ಯಾವುದೇ ವಿಷಮ ಸ್ಥಿತಿಯಲ್ಲಿಯೂ ಜನರ ಕೈಬಿಡದ ಕೃಷಿಕರ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರದಿಂದ ಈಗಾಗಲೇ ಹಲವಾರು ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಹೇಳಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

ಹಿಂದಿನ ಸರ್ಕಾರಗಳು ಭ್ರಷ್ಟಾಚಾರದಲ್ಲಿ ಮುಳುಗಿದ್ದ ಹಿನ್ನೆಲೆಯಲ್ಲಿ ಕೃಷಿಕರನ್ನು ಕಡೆಗಣಿಸಲಾಗಿತ್ತು. ಅವರಿಗೆ ಸಿಗಬೇಕಿದ್ದ ಸೌಲಭ್ಯಗಳಿಂದ ವಂಚಿಸಲಾಗಿತ್ತು. ಆದರೆ ಎನ್‌ಡಿಎ ನೇತೃತ್ವದ ಸರ್ಕಾರ, ಕೃಷಿ ಕ್ಷೇತ್ರವನ್ನು ಆಧುನೀಕರಣಗೊಳಿಸಿದೆ. ಹಲವಾರು ಕಾರ್ಯಯೋಜನೆಗಳನ್ನು ರೂಪಿಸುವ ಮೂಲಕ, ಇಂದು ಕೃಷಿ ಕ್ಷೇತ್ರದಲ್ಲಿ ಅಗಾಧ ಪ್ರಗತಿಯಾಗಿದೆ ಎಂದರು.

ಈ ವೇಳೆ ಬಿಹಾರ ರಾಜ್ಯಪಾಲ ಆರೀಫ್ ಮೊಹಮ್ಮದ್ ಖಾನ್, ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್, ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಸಚಿವ ಜಿತನ್ ರಾಮ್ ಮಾಂಝಿ, ಕೇಂದ್ರ ಜವಳಿ ಖಾತೆ ಸಚಿವ ಗಿರಿರಾಜ್ ಸಿಂಗ್, ಕೇಂದ್ರ ಆಹಾರ ಸಂಸ್ಕರಣಾ ಮತ್ತು ಉದ್ಯಮ ಖಾತೆ ಸಚಿವ ಚಿರಾಗ್ ಪಾಸ್ವಾನ್ ಉಪಸ್ಥಿತರಿದ್ದರು.

*****************

ಮಧ್ಯಪ್ರದೇಶದ ಭೋಪಾಲದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಜಾಗತಿಕ ಹೂಡಿಕೆದಾರರ ಶೃಂಗಸಭೆ-ಜಿಐಎಸ್‌ಗೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಭಾರತದ ಬೆಳವಣಿಗೆಯಲ್ಲಿ ಜಗತ್ತು ಅಭೂತಪೂರ್ವ ವಿಶ್ವಾಸ ತೋರುತ್ತಿರುವ ಸಂದರ್ಭದಲ್ಲಿ ದೇಶಕ್ಕೆ ಇದು ಒಂದು ಐತಿಹಾಸಿಕ ಕ್ಷಣವಾಗಿದೆ. ಸಾಮಾನ್ಯ ಜನರು, ಆರ್ಥಿಕ ತಜ್ಞರು, ಜಾಗತಿಕ ಸಂಸ್ಥೆಗಳು ಸೇರಿದಂತೆ ಇತರೆ ರಾಷ್ಟ್ರಗಳು ಭಾರತದ ಕುರಿತು ಹೆಚ್ಚಿನ ಭರವಸೆ ಹೊಂದಿದ್ದಾರೆ ಎಂದರು.

ಮುಂಬರುವ ವರ್ಷಗಳಲ್ಲಿ ಭಾರತ ಜಗತ್ತಿನ ಅತಿವೇಗವಾಗಿ ಬೆಳೆಯುತ್ತಿರುವ ದೇಶವಾಗಿ ಮುಂದುವರೆಯಲಿದೆ ಎಂದು ವಿಶ್ವಬ್ಯಾಂಕ್ ತಿಳಿಸಿದೆ. ಹವಾಮಾನ ಬದಲಾವಣೆ ಕುರಿತ ವಿಶ್ವಸಂಸ್ಥೆಯ ಮಂಡಳಿಯೊಂದು ಭಾರತವನ್ನು ಸೌರಶಕ್ತಿ ಕೇಂದ್ರವಾಗಿ ಗುರುತಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಎರಡು ದಿನಗಳ ಶೃಂಗಸಭೆಯಲ್ಲಿ ಔಷಧ ಮತ್ತು ವೈದ್ಯಕೀಯ ಸಾಧನಗಳು, ಸಾರಿಗೆ ಮತ್ತು ಸರಕು, ಕೈಗಾರಿಕೆ, ಕೌಶಲ್ಯಾಭಿವೃದ್ಧಿ, ಪ್ರವಾಸೋದ್ಯಮ ಮತ್ತು ಎಂಎಸ್‌ಎಂಇಗಳ ಕುರಿತ ಚರ್ಚೆ ನಡೆಯಲಿದೆ.

******************

ಪ್ರಧಾನಿ ನರೇಂದ್ರ ಮೋದಿ ಇಂದು ಅಸ್ಸಾಂಗೆ ಭೇಟಿ ನೀಡಿದ್ದಾರೆ. ಭೇಟಿಯ ಭಾಗವಾಗಿ ಗುವಾಹಟಿಯಲ್ಲಿಂದು ನಡೆಯುತ್ತಿರುವ ಜುಮೋಯಿರ್ ಬಿನಾಂದಿನಿ ಕಾರ್ಯಕ್ರಮದಲ್ಲಿ ಪ್ರಧಾನಿ, ಭಾಗವಹಿಸಿದ್ದಾರೆ.

ನಂತರ ಅವರು ಸರುಸಜೈ ಕ್ರೀಡಾಂಗಣದಲ್ಲಿ ನಡೆಯಲಿರುವ ಜುಮುರ್ ನೃತ್ಯ ಪ್ರದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಮಾರಂಭದಲ್ಲಿ ೮ ಸಾವಿರದ ೫೦೦ ಕ್ಕೂ ಹೆಚ್ಚು ಚಹಾ ಬುಡಕಟ್ಟು ಸಮುದಾಯದ ಕಲಾವಿದರು ಜುಮುರ್ ನೃತ್ಯವನ್ನು ಪ್ರದರ್ಶಿಸಲಿದ್ದಾರೆ.

ನಾಳೆ ಪ್ರಧಾನಿ ನರೇಂದ್ರ ಮೋದಿ ಅವರು 'ಅಡ್ವಾಂಟೇಜ್ ಅಸ್ಸಾಂ ೨.೦ ಹೂಡಿಕೆ ಮತ್ತು ಮೂಲಸೌಕರ್ಯ ಶೃಂಗಸಭೆ'ಯನ್ನು ಉದ್ಘಾಟಿಸಲಿದ್ದಾರೆ.

******************

ಭಾರತ ಮತ್ತು ಬ್ರಿಟನ್ ನಡುವೆ ಮುಕ್ತ ವ್ಯಾಪಾರ ಮಾತುಕತೆಗಳನ್ನು ಪುನರಾರಂಭಿಸಲು ಎರಡೂ ದೇಶಗಳು ಒಪ್ಪಿಕೊಂಡಿವೆ.

ನವದೆಹಲಿಯಲ್ಲಿಂದು ಬ್ರಿಟನ್ ವಾಣಿಜ್ಯ ಸಚಿವ ಜೊನಾಥನ್ ರೆನಾಲ್ಡ್ಸ್ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಈ ವಿಷಯ ತಿಳಿಸಿದರು.

೨೦೨೪ ರ ನವೆಂಬರ್‌ನಲ್ಲಿ ರಿಯೊ ಡಿ ಜನ್ಯೆರೊದಲ್ಲಿ ನಡೆದ ಜಿ-೨೦ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಬ್ರಿಟನ್ ಪ್ರಧಾನಿ ಸರ್ ಕೀರ್ ಸ್ಟಾರ್ಮರ್ ನಡುವೆ ನಡೆದ ಚರ್ಚೆಗಳ ಫಲಿತಾಂಶ ಇದಾಗಿದೆ ಎಂದು ಪಿಯೂಷ್ ಗೋಯಲ್ ಹೇಳಿದರು.

ಬ್ರಿಟನ್‌ನಲ್ಲಿ ಚುನಾವಣೆಗಳಿಂದಾಗಿ ಎಫ್‌ಟಿಎ ಕುರಿತ ಮಾತುಕತೆಗಳು ಸ್ಥಗಿತಗೊಂಡಿದ್ದವು ಎಂದರು.

ಭಾರತ ಮತ್ತು ಬ್ರಿಟನ್ ನಡುವಿನ ಮುಕ್ತ ವ್ಯಾಪಾರ ಒಪ್ಪಂದ ಭವಿಷ್ಯದ ದೃಷ್ಟಿಯಿಂದ ಸಮಾನ, ಸಮತೋಲಿತ, ಪಾರದರ್ಶಕ ಮತ್ತು ಪರಸ್ಪರ ಪ್ರಯೋಜನಕಾರಿ ಒಪ್ಪಂದವಾಗಲಿದೆ. ಇದರಿಂದ ಎರಡೂ ದೇಶಗಳಿಗೆ ಪ್ರಯೋಜನವಾಗಲಿದೆ ಎಂದು ಪಿಯೂಷ್ ಗೋಯಲ್ ಹೇಳಿದರು.

******************

ಕೃತಕ ಬುದ್ಧಿಮತ್ತೆ-ಎಐ ತಂತ್ರಜ್ಞಾನವನ್ನು ಬಳಸಿಕೊಂಡು ರಕ್ಷಣಾ ವಲಯದಲ್ಲಿ ಹೊಸ ಸಂಶೋಧನೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ ನೀಡಿದ್ದಾರೆ.

ಹಿಮಾಚಲ ಪ್ರದೇಶದ ಐಐಟಿ ಮಂಡಿಯ ೧೬ನೇ ಸಂಸ್ಥಾಪನಾ ದಿನದ ಅಂಗವಾಗಿ ಆಯೋಜಿಸಿದ್ದ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ರಕ್ಷಣಾ ವಲಯವನ್ನು ಮತ್ತಷ್ಟು ಬಲಪಡಿಸಲು ರಕ್ಷಣಾ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ಚಾಲಿತ ಪ್ರಗತಿಯ ಅಗತ್ಯವನ್ನು ಅವರು ಒತ್ತಿ ಹೇಳಿದರು.

ರಕ್ಷಣಾ ಉತ್ಪಾದನೆಯಲ್ಲಿ ಭಾರತ ಸ್ವಾವಲಂಬಿಯಾಗುತ್ತಿದೆ. ಸುಮಾರು ೭೦ ಪ್ರತಿಶತ ರಕ್ಷಣಾ ಉಪಕರಣಗಳನ್ನು ದೇಶೀಯವಾಗಿ ಉತ್ಪಾದಿಸಲಾಗುತ್ತಿದೆ ಎಂದರು.

೨೦೨೩-೨೪ ರಲ್ಲಿ, ಭಾರತ ೨೩ ಸಾವಿರ ಕೋಟಿ ರೂಪಾಯಿ ಮೌಲ್ಯದ ರಕ್ಷಣಾ ಸಾಮಗ್ರಿಗಳನ್ನು ರಫ್ತು ಮಾಡಿದೆ. ಇದನ್ನು ೨೦೨೯ ರ ವೇಳೆಗೆ ೫೦ ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸುವ ಗುರಿಯನ್ನು ಭಾರತ ಹೊಂದಿದೆ ಎಂದು ರಾಜನಾಥ್ ಸಿಂಗ್ ಹೇಳಿದರು.

******************

ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ಇಂದು ೨೦೨೫ರ ಆರ್ಥಿಕ ಸಾಕ್ಷರತಾ ಸಪ್ತಾಹವನ್ನು ಪ್ರಾರಂಭಿಸಿದೆ. ಇದು ಜನರಲ್ಲಿ ಆರ್ಥಿಕ ಜಾಗೃತಿಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.

ಇಂದಿನಿಂದ ಇದೇ ೨೮ರವರೆಗೆ 'ಹಣಕಾಸು ಸಾಕ್ಷರತೆ-ಮಹಿಳೆಯರ ಸಮೃದ್ಧಿ' ಎಂಬ ಧ್ಯೇಯವಾಕ್ಯದಡಿ ಈ ಅಭಿಯಾನ ನಡೆಯುತ್ತಿದೆ.

ಅರುಣಾಚಲ ಪ್ರದೇಶದ ಇಟಾ ನಗರದಲ್ಲಿ ಆರ್‌ಬಿಐ ಪ್ರಾದೇಶಿಕ ಕಚೇರಿಯ ಪ್ರಧಾನ ವ್ಯವಸ್ಥಾಪಕ ಅಭಿಷೇಕ್ ಮಜುಂದಾರ್ ಈ ಅಭಿಯಾನಕ್ಕೆ ಚಾಲನೆ ನೀಡಿದರು.

ಅಭಿಯಾನದ ಅಂಗವಾಗಿ ಬ್ಯಾಂಕ್‌ಗಳು ತಮ್ಮ ವೆಬ್‌ಸೈಟ್‌ಗಳು, ಎಟಿಎಂಗಳು, ಮೊಬೈಲ್ ಅಪ್ಲಿಕೇಷನ್‌ಗಳು ಹಾಗೂ ತಮ್ಮ ಶಾಖೆಗಳಲ್ಲಿ ಆರ್‌ಬಿಐ ಸಿದ್ಧಪಡಿಸಿದ ಪೋಸ್ಟರ್‌ಗಳನ್ನು ಪ್ರದರ್ಶಿಸುವ ಮೂಲಕ ಜಾಗೃತಿ ಮೂಡಿಸುತ್ತಿವೆ.

*****************

ನವದೆಹಲಿಯಲ್ಲಿ ಇಂದು ಕೇಂದ್ರ ಕಾರ್ಮಿಕ ಸಚಿವ ಮನ್ಸುಖ್ ಮಾಂಡವೀಯ ಅವರು ಅಂತಾರಾಷ್ಟ್ರೀಯ ಕಾರ್ಮಿಕ ಸಂಸ್ಥೆಯ ಮಹಾನಿರ್ದೇಶಕ ಗಿಲ್ಬರ್ಟ್ ಹೌಂಗ್ಬೊ ಅವರೊಂದಿಗೆ ಕಾರ್ಮಿಕ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ಹೆಚ್ಚಿಸುವ ಕುರಿತು ಮಾತುಕತೆ ನಡೆಸಿದರು.

ಈ ಕುರಿತು ಸಾಮಾಜಿಕ ಜಾಲತಾಣದ ಮೂಲಕ ಮಾಹಿತಿ ನೀಡಿದ ಸಚಿವ ಮನ್ಸುಖ್ ಮಾಂಡವೀಯ, ವಿಕಸಿತ ಭಾರತ ೨೦೪೭ ಮತ್ತು ಜಿ-೨೦ ಆದ್ಯತೆಗಳೊಂದಿಗೆ ಉದ್ಯೋಗಿಗಳ ಸ್ಥಿತಿಸ್ಥಾಪಕತ್ವಕ್ಕೆ ಭಾರತದ ಬದ್ಧತೆಯನ್ನು ಒತ್ತಿ ಹೇಳುವ ನಿಟ್ಟಿನಲ್ಲಿ ಚರ್ಚೆ ನಡೆಯಿತು. ಹೆಚ್ಚು ಸಮಗ್ರ ಮತ್ತು ಸುಸ್ಥಿರ ಭವಿಷ್ಯವನ್ನು ರೂಪಿಸುವಲ್ಲಿ ಅಂತಾರಾಷ್ಟ್ರೀಯ ಕಾರ್ಮಿಕರ ಜೊತೆ ತೊಡಗಿಸಿಕೊಳ್ಳುವಿಕೆಯನ್ನು ಎದುರು ನೋಡುತ್ತಿದ್ದೇವೆ ಎಂದು ಹೇಳಿದ್ದಾರೆ.

*****************

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಿದೆ.

ಟಾಸ್ ಗೆದ್ದ ಯುಪಿ ವಾರಿಯರ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

******************

ಪಾಕಿಸ್ತಾನದ ರಾವಲ್‌ಪಿಂಡಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ 'ಎ' ಗುಂಪಿನ ಪಂದ್ಯದಲ್ಲಿ ಬಾಂಗ್ಲಾದೇಶ ಹಾಗೂ ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಿವೆ.

ಮೊದಲು ಬ್ಯಾಟಿಂಗ್ ಮಾಡಿದ ಬಾಂಗ್ಲಾದೇಶ ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೨೩೬ ರನ್ ಮಾಡಿದೆ. ಗುರಿಯನ್ನು ಬೆನ್ನತ್ತಿರುವ ನ್ಯೂಜಿಲೆಂಡ್, ಇತ್ತೀಚಿನ ವರದಿಯಂತೆ ೧೪ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೬೬ ರನ್ ಮಾಡಿ ಆಡುತ್ತಿದೆ.

******************

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭಮೇಳದಲ್ಲಿ ಇಂದು ಸಹ ಕೋಟ್ಯಂತರ ಶ್ರದ್ಧಾಳುಗಳು ಪುಣ್ಯಸ್ನಾನದಲ್ಲಿ ಭಾಗಿಯಾದರು. ಈಗಾಗಲೇ ೬೦ ಕೋಟಿಗೂ ಅಧಿಕ ಭಕ್ತರು ತ್ರಿವೇಣಿ ಸಂಗಮದಲ್ಲಿ ಪುಣ್ಯಸ್ನಾನ ಮಾಡಿದ್ದಾರೆ.

ಕುಂಭಮೇಳದಲ್ಲಿ ಭಾಗಿಯಾಗುವ ಭಕ್ತರಿಗೆ ಅಗತ್ಯ ವ್ಯವಸ್ಥೆ ಕಲ್ಪಿಸಲಾಗಿದ್ದು, ಎಲ್ಲೆಡೆ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಸುಮಾರು ೧೫ ಸಾವಿರಕ್ಕೂ ಅಧಿಕ ಕಾರ್ಮಿಕರು ನೈರ್ಮಲ್ಯ ಅಭಿಯಾನದಲ್ಲಿ ಪಾಲ್ಗೊಳ್ಳುವ ಮೂಲಕ ವಿಶ್ವದಾಖಲೆ ಸೃಷ್ಟಿಯಾಗಿದೆ.

ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಿರುವ ಕುರಿತು ಪುಣ್ಯಸ್ನಾನದಲ್ಲಿ ಭಾಗಿಯಾದ ಯಾತ್ರಾರ್ಥಿಗಳು ಸಂತಸ ವ್ಯಕ್ತಪಡಿಸಿದ್ದಾರೆ.

ಇದೇ ೨೬ರ ಶಿವರಾತ್ರಿಯ ದಿನದಂದು ಮಹಾಕುಂಭಮೇಳ ಸಂಪನ್ನಗೊಳ್ಳಲಿರುವ ಹಿನ್ನೆಲೆಯಲ್ಲಿ ದೇಶ-ವಿದೇಶಗಳಿಂದ ಲಕ್ಷಾಂತರ ಮಂದಿ ಪ್ರಯಾಗ್‌ರಾಜ್‌ಗೆ ಆಗಮಿಸುತ್ತಿದ್ದಾರೆ.

*********ಮುಕ್ತಾಯ*********